# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 698 |
| ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 04.03.2021 |
| ಉತ್ತರಿಸುವ ಸಚಿವರು | : | ಮಾನ್ಯ ಮುಖ್ಯಮಂತ್ರಿಗಳು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲಾ ಮಾಂಜ್ರಾ ಸರಣಿ ಬ್ಯಾರೇಜ್‌ಗಳಲ್ಲಿ ಗೇಟು ಸಮಸ್ಯೆಯಾಗಿ ನೀರು ನಿಲ್ಲದಿರುವುದರ ಬಗ್ಗೆ ತನಿಖೆಗೆ ಹೈಕೋರ್ಟ ಆದೇಶಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದಲ್ಲಿ, ತನಿಖೆ ಯಾವ ಹಂತದಲ್ಲಿದೆ; ಮುಗಿದಿದ್ದಲ್ಲಿ, ಮಾಹಿತಿ ಒದಗಿಸುವುದು. | ಬ್ಯಾರೇಜ್ ಗೇಟುಗಳ ಸಮಸ್ಯೆಯಾಗಿ ನೀರು ನಿಲ್ಲದಿರುವ ಬಗ್ಗೆ ಶ್ರೀ ಗುರುನಾಥ ವಡ್ಡೆ, ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆಯ (ಡಬ್ಲ್ಯೂಪಿ ಸಂ.15937/2019) ಕುರಿತು ಕರ್ನಾಟಕ ಉಚ್ಚನ್ಯಾಯಾಲಯದಲ್ಲಿ ದಿ:27.06.2019 ರಂದು ವಿಚಾರಣೆ ನಡೆದು, ಅಧೀಕ್ಷಕ ಅಭಿಯಂತರರು, ಕೃಭಾಜನಿನಿ. ಜೆ.ಬಿ.ಸಿ. ವೃತ್ತ, ಭೀಮರಾಯನಗುಡಿ ಇವರು ತಪಾಸಣಾ ವರದಿಯನ್ನು ಅಂಗೀಕರಿಸಿ, ಅದರ ಮೇರೆಗೆ ಇತ್ಯರ್ಥವಾಗಿರುತ್ತದೆ ಮತ್ತು ಸದರಿ ಮೊಕದ್ದಮೆಯನ್ನು ವಜಾಗೊಳಿಸಲಾಗಿದೆ. |
| ಆ) | ಹಾಗಿದ್ದಲ್ಲಿ ನೂರಾರು ಕೋಟಿ ರೂಪಾಯಿ ವೆಚ್ಚ ಮಾಡಿ ನಿರ್ಮಾಣ ಮಾಡಲಾದ ಯೋಜನೆಯಲ್ಲಿ ಅಕ್ರಮ ಮತ್ತು ಲೋಪದೋಷಗಳನ್ನು ಎಸಗಿದ್ದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ; | 2016 ನೇ ಸಾಲಿನಲ್ಲಿ ಬೃಹತ್ ಪ್ರಮಾಣದ ಪ್ರವಾಹ ಬಂದಿದ್ದು, ಕೆಲವು ಗೇಟುಗಳು ಸ್ವಲ್ಪ ಪ್ರಮಾಣದಲ್ಲಿ ಹಾನಿಗೊಳಗಾಗಿದ್ದು, ಹಾನಿಗೊಳಗಾಗಿದ್ದ ಗೇಟುಗಳು 2017 ನೇ ಸಾಲಿನಲ್ಲಿ ಮೂಲ ಗುತ್ತಿಗೆದಾರರಿಂದ ದುರಸ್ತಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಇದರಿಂದ, ಸರ್ಕಾರಕ್ಕೆ ಯಾವುದೇ ಆರ್ಥಿಕ ಹೊರೆಯಿಲ್ಲದೆ ದುರಸ್ತಿಗೊಳಿಸಲಾಗಿರುತ್ತದೆ. |
| ಇ) | ನಾಲ್ಕು ಬ್ಯಾರೇಜ್‌ಗಳಿಗೆ ಖರ್ಚು ಮಾಡಿರುವ ಹಣ ಎಷ್ಟು ಮತ್ತು ಯಾವ ವರ್ಷದಲ್ಲಿ ಬ್ಯಾರೇಜ್‌ಗಳನ್ನು ನಿರ್ಮಾಣ ಮಾಡಲಾಗಿದೆ. (ಸಂಪೂರ್ಣ ಮಾಹಿತಿ ನೀಡುವುದು) | ಬೀದರ್ ಜಿಲ್ಲೆಯಡಿ ಗೋದಾವರಿ ಕಣಿವೆಯ ಮಾಂಜ್ರಾ ನದಿ ಪಾತ್ರದಡಿ ಕೃಷ್ಣಾ ಭಾಗ್ಯ ಜಲ ನಿಗಮದ ವತಿಯಿಂದ ನಿರ್ಮಿಸಲಾದ 4 ಸರಣಿ ಬ್ರಿಡ್ಜ್ ಕಂ ಬ್ಯಾರೇಜ್ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗಿದ್ದು, ವಿವರಗಳು ಈ ಕೆಳಗಿನಂತಿವೆ; |
| ಈ) | ಈ ಸರಣಿ ಬ್ಯಾರೇಜ್‌ಗಳ ನಿರ್ಮಾಣದಿಂದ ಒಟ್ಟು ಎಷ್ಟು ಎಕರೆ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲಾಗಿದೆ; | (see table below) |

| ಕ್ರ ಸಂ | ಯೋಜನೆ ಹೆಸರು | ನಿರ್ಮಾಣದ ವೆಚ್ಚ (ರೂ. ಕೋಟಿಗಳಲ್ಲಿ) | ನೀರಾವರಿ ಒಳಪಡುವ ಕ್ಷೇತ್ರ ಹೆ.ಗಳಲ್ಲಿ. | ಪೂರ್ಣಗೊಂಡ ವರ್ಷ |
|---|---|---|---|---|
| 1 | ಜೀರಗಿಹಾಳ ಬ್ರಿಡ್ಜ್ ಕಂ ಬ್ಯಾರೇಜ್ | 57.84 | 990 | 2014 |
| 2 | ಮಾಣಿಕೇಶ್ವರ ಬ್ರಿಡ್ಜ್ ಕಂ ಬ್ಯಾರೇಜ್ | 50.73 | 990 | 2012 |
| 3 | ಹಾಲಹಳ್ಳಿ | 104.27 | 3366 | 2013 |
| 4 | ಚಂದಾಪುರ | 58.66 | 990 | 2011 |
| | ಒಟ್ಟು | 271.50 | 6336 | |

ಸಂಖ್ಯೆ:ಜಸಂಇ 38 ಎಂಎಲ್ಎ 2021

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ